# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ವೆಂಕಟೇಶ್ ಮೃತ್ಯುಂಜಯ ಪುರಾಣಿಕ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ (ನಿವೃತ್ತ), ಕಪ್ಪಲಗುದ್ದಿ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

ಓದಲಾಗಿದೆ:

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM/2595/2014/PP, ದಿನಾಂಕ:19.10.2016
2) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪತ್ರ ಸಂಖ್ಯೆ: ಕಂಪ್ಲೇಂಟ್/ಉಪಲೋಕ್/ಬಿಜಿಎಂ-2595/2014/ಪಿಪಿ, ದಿನಾಂಕ 01.04.2017

ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು-1 ರವರು ದಿನಾಂಕ: 06.10.2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಪ್ರಭಾಕರ್ ಮಹಾದೇವ್ ದೇವಕರ್ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು, ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕು ಕಪ್ಪಲಗುದ್ದಿ ಗ್ರಾಮ ಪಂಚಾಯತಿಯಲ್ಲಿ 2011-12 ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಬಿಡುಗಡೆಯಾದ ಅನುದಾನವನ್ನು ಹಾಗೂ ಮರಣ ಹೊಂದಿದ ಮತ್ತು ಉದ್ಯೋಗಸ್ಥರ ಹೆಸರಿನಲ್ಲಿ ಜಾಬ್‌ಕಾರ್ಡ್ ತೆಗೆದು ಹಣವನ್ನು ದುರುಪಯೋಗಪಡಿಸಿಕೊಂಡಿರುತ್ತಾರೆ. ಆದ್ದರಿಂದ ಇವರ ವಿರುದ್ಧ ಕ್ರಮ ಜರುಗಿಸಬೇಕೆಂದು ಕೋರಿದ್ದು, ಸದರಿ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984 ರ ಕಲಂ 9 ರ ಅಡಿಯಲ್ಲಿ ತನಿಖೆ ಮಾಡಲಾಗಿದೆ.

ತನಿಖೆಯಲ್ಲಿ ಕಂಡುಬಂದಿರುವ ನ್ಯೂನ್ಯತೆಗಳಿಗೆ ಸಂಬಂಧಿಸಿದಂತೆ, ಎದುರುದಾರರಿಂದ ಯಾವುದೇ ದಾಖಲಾತಿಗಳಾಗಲೀ, ಆಕ್ಷೇಪಣೆಯಾಗಲೀ, ಪೂರಕ ಸಾಕ್ಷ್ಯಾಧಾರಗಳು ಸಲ್ಲಿಸದೇ ಇರುವ ಕಾರಣ, ದೂರುದಾರರ ಮೇಲಿನ ಆಪಾದನೆಗಳು ಸಾಬೀತಾಗಿರುವುದು ಕಂಡು ಬಂದಿರುವ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1)(ii) ಮತ್ತು (iii) ರನ್ವಯ ಎದುರುದಾರರಾದ ಶ್ರೀ ವೆಂಕಟೇಶ್ ಮೃತ್ಯುಂಜಯ ಪುರಾಣಿಕ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ (ನಿವೃತ್ತ), ಕಪ್ಪಲಗುದ್ದಿ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಶಿಸ್ತು ನಡವಳಿಕೆ ಕ್ರಮ ಜರುಗಿಸಲು ಮತ್ತು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಈ ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ವೆಂಕಟೇಶ್ ಮೃತ್ಯುಂಜಯ ಪುರಾಣಿಕ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ (ನಿವೃತ್ತ), ಕಪ್ಪಲಗುದ್ದಿ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 742 ಗ್ರಾಪಂಕಾ 2016, ಬೆಂಗಳೂರು, ದಿನಾಂಕ: 12.04.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ವೆಂಕಟೇಶ್ ಮೃತ್ಯುಂಜಯ ಪುರಾಣಿಕ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ (ನಿವೃತ್ತ), ಕಪ್ಪಲಗುದ್ದಿ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ)(1) ರಡಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214 ರಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ.
5) ಕಾರ್ಯನಿರ್ವಾಹಕ ಅಧಿಕಾರಿ, ರಾಯಭಾಗ ತಾಲ್ಲೂಕು ಪಂಚಾಯತಿ, ರಾಯಭಾಗ, ಬೆಳಗಾವಿ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಶ್ರೀ ವೆಂಕಟೇಶ್ ಮೃತ್ಯುಂಜಯ ಪುರಾಣಿಕ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ (ನಿವೃತ್ತ), ಕಪ್ಪಲಗುದ್ದಿ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.